# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| 1 | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 441 |
| 2 | ಸದಸ್ಯರ ಹೆಸರು | ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| 3 | ವಿಷಯ | ಹೊಸದಾಗಿ ತಾಲ್ಲೂಕುಗಳನ್ನು ಘೋಷಿಸಿರುವ ಬಗ್ಗೆ. |
| 4 | ಉತ್ತರಿಸುವ ದಿನಾಂಕ | 12.12.2018 |
| 5 | ಉತ್ತರಿಸುವ ಸಚಿವರು | ಕಂದಾಯ ಹಾಗೂ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| (ಅ) | ಕರ್ನಾಟಕ ರಾಜ್ಯದಲ್ಲಿ ಹೊಸದಾಗಿ ಘೋಷಿಸಿರುವ ತಾಲ್ಲೂಕುಗಳೆಷ್ಟು? | 2017-18ನೇ ಸಾಲಿನ ಆಯವ್ಯಯದಲ್ಲಿ ಘೋಷಿಸಲಾದಂತೆ 50 ಹೊಸ ತಾಲ್ಲೂಕುಗಳನ್ನು ರಚಿಸಲಾಗಿದೆ. |
| (ಆ) | ಬೆಂಗಳೂರು ನಗರ ಜಿಲ್ಲೆಯಲ್ಲಿ ಘೋಷಿಸಿರುವ ಬೆಂಗಳೂರು ಉತ್ತರ ಹೊಸ ತಾಲ್ಲೂಕಿಗೆ ಆಡಳಿತಾತ್ಮಕ ಅನುಮೋದನೆ ನೀಡಲಾಗಿ ದೆಯೇ? | ಸರ್ಕಾರದ ಅಧಿಸೂಚನೆ ಸಂಖ್ಯೆ: ಕಂಇ 143 ಭೂದಾಪು 2017 ದಿನಾಂಕ: 27.01.2018 ರಂದು ಬೆಂಗಳೂರು ಉತ್ತರ ತಾಲ್ಲೂಕು (ಯಲಹಂಕ) ತಾಲ್ಲೂಕನ್ನಾಗಿ ರಚಿಸಲಾಗಿದೆ.<br>ಕಂದಾಯ ಇಲಾಖಾ ವತಿಯಿಂದ ತಾಲ್ಲೂಕು ಕಛೇರಿಯನ್ನು ಪ್ರಾರಂಭ ಮಾಡಲಾಗಿದೆ ಮತ್ತು ಇತರೆ ಇಲಾಖೆಗಳ ತಾಲ್ಲೂಕು ಮಟ್ಟದ ಕಛೇರಿಗಳನ್ನು ಆರ್ಥಿಕ ಇಲಾಖೆಯ ಸಹಮತಿಯೊಂದಿಗೆ ಹಂತ ಹಂತವಾಗಿ ತೆರೆಯಲು ಅನುಮತಿ ನೀಡಲಾಗಿದೆ. |
| (ಇ) | ಬೆಂಗಳೂರು ಉತ್ತರ ಮತ್ತು ಯಲಹಂಕ ತಾಲ್ಲೂಕು ಒಟ್ಟಾಗಿರುವುದರಿಂದ ಸಮರ್ಪಕ ವಾಗಿ ಕೆಲಸ ನಡೆಯದಿರು ವುದರಿಂದ ಉತ್ತರ ತಾಲ್ಲೂಕಿಗೆ ಪ್ರತ್ಯೇಕ ಆಡಳಿತ ವ್ಯವಸ್ಥೆಯನ್ನು ಮಾಡಲಾಗುವುದೇ: | ಸರ್ಕಾರದ ಆದೇಶ ಸಂಖ್ಯೆ: ಕಂಇ 35 ಭೂದಾಪು 2017 ದಿನಾಂಕ: 17.01.2018ರಲ್ಲಿ ತಾಲೂಕು ಕಛೇರಿಗೆ ಅಗತ್ಯವಾದ ಹುದ್ದೆಗಳನ್ನು ಸೃಜಿಸಲಾಗಿದೆ.<br>ಬೆಂಗಳೂರು ಉತ್ತರ ಮತ್ತು ಯಲಹಂಕ ತಾಲ್ಲೂಕಿಗೆ ಪ್ರತ್ಯೇಕ ಸಿಬ್ಬಂದಿಗಳನ್ನೊಳಗೊಂಡಂತೆ ಆಡಳಿತ ವ್ಯವಸ್ಥೆಯನ್ನು ಕಲ್ಪಿಸಲಾಗಿರುತ್ತದೆ. |
| (ಈ) | ಬೆಂಗಳೂರು ಉತ್ತರ ತಾಲ್ಲೂಕಿಗೆ ಅನುದಾನ ಬಿಡುಗಡೆ ಮಾಡಲಾಗಿದೆಯೇ: | ಬೆಂಗಳೂರು ಉತ್ತರ (ಯಲಹಂಕ) ತಾಲ್ಲೂಕಿಗೆ ಈಗಾಗಲೇ ಒಟ್ಟು ರೂ. 15.00 ಲಕ್ಷಗಳ ಮೂಲಭೂತ ಸೌಲಭ್ಯಕ್ಕಾಗಿ ಜಿಲ್ಲಾಧಿಕಾರಿಗಳಿಗೆ ಬಿಡುಗಡೆ ಮಾಡಲಾಗಿದೆ. |
| (ಉ) | ಬೆಂಗಳೂರು ಉತ್ತರ ತಾಲ್ಲೂಕು ಪಂಚಾಯಿತಿ ರಚಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ? | ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ ರಾಜ್ ಇಲಾಖೆಯು 50 ಹೊಸ ತಾಲೂಕುಗಳಲ್ಲಿ ಪಂಚಾಯಿತಿ ಕಛೇರಿಗಳನ್ನು ಪ್ರಾರಂಭಿಸಲು ಆರ್ಥಿಕ ಇಲಾಖೆಗೆ ಪ್ರಸ್ತಾವನೆಯನ್ನು ಕಳುಹಿಸಲಾಗಿದೆ. ಆರ್ಥಿಕ ಇಲಾಖೆಯಿಂದ ಅನುಮೋದನೆ ದೊರೆತ ನಂತರ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ ರಾಜ್ ಅಧಿನಿಯಮ 1993ರ ಪ್ರಕರಣ 302(ಎ) ರನ್ವಯ ಹೊಸ ತಾಲೂಕು ಪಂಚಾಯಿತಿ ಕಛೇರಿಗಳನ್ನು ಪ್ರಾರಂಭಿಸಲಾಗುವುದೆಂದು ತಿಳಿಸಿದೆ. |

**ಸಂಖ್ಯೆ: ಕಂಇ 122 ಭೂದಾಪು 2018**

**ಆರ್.ವಿ. ದೇಶಪಾಂಡೆ**
ಕಂದಾಯ ಹಾಗೂ ಕೌಶಲ್ಯಾಭಿವೃದ್ಧಿ,
ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು